ವಿ-72-103

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ನೀಡಿರುವ ಗಮನ ಸೆಳೆಯುವ ಸೂಚನೆ ಮೇಲಿನ ಹೇಳಿಕೆ.**

**ಸೂಚನೆ:**

ರಾಜ್ಯದಲ್ಲಿ ಪ್ರತಿ ಮನೆಗೂ ಶೌಚಾಲಯ ನಿರ್ಮಿಸುವ ಸ್ವಚ್ಛ ಭಾರತ ಅಭಿಯಾನದಡಿ 'ಕರ್ನಾಟಕವನ್ನು ಕೇಂದ್ರ ಸರ್ಕಾರ' ಬಯಲು ಬಹಿರ್ದೆಸೆ ಮುಕ್ತ ರಾಜ್ಯವೆಂದು ಘೋಷಿಸಿದ್ದರೂ, ಗ್ರಾಮೀಣ ಭಾಗದ ಜನ ಈಗಲೂ ಬಹಿರ್ದೆಸೆಗೆ ಬಯಲನ್ನೇ ಅವಲಂಬಿಸಿದ್ದಾರೆ ಮತ್ತು ಜನ ಪೂರ್ಣ ಪ್ರಮಾಣದಲ್ಲಿ ಶೌಚಾಲಯಗಳನ್ನು ನಿರ್ಮಿಸಿಕೊಂಡಿಲ್ಲದಿರುವ ವಿಚಾರದ ಬಗ್ಗೆ ಸರ್ಕಾರದ ಗಮನ ಸೆಳೆಯ ಬಯಸುತ್ತೇನೆ.

**ಹೇಳಿಕೆ:**

ರಾಜ್ಯದ ಗ್ರಾಮೀಣ ಭಾಗದಲ್ಲಿ 2012ರಲ್ಲಿ ನಡೆಸಿದ ಬೇಸ್‌ಲೈನ್ ಸಮೀಕ್ಷೆಯಂತೆ 70.26ಲಕ್ಷ ಕುಟುಂಬಗಳಿದ್ದು, ಈ ಪೈಕಿ 24.83ಲಕ್ಷ ಕುಟುಂಬಗಳು ಶೌಚಾಲಯ ಹೊಂದಿದ್ದು, 45.48ಲಕ್ಷ ಕುಟುಂಬಗಳು ಶೌಚಾಲಯ ರಹಿತ ಕುಟುಂಬಗಳು ಎಂದು ವರದಿಯಾಗಿರುತ್ತದೆ. ಈ ಎಲ್ಲಾ ಶೌಚಾಲಯ ರಹಿತ ಕುಟುಂಬಗಳಿಗೆ 19ನೇ ನವೆಂಬರ್ 2018ರೊಳಗೆ ಶೌಚಾಲಯಗಳನ್ನು ನಿರ್ಮಿಸಿ ರಾಜ್ಯದ ಗ್ರಾಮೀಣ ಪ್ರದೇಶವನ್ನು ವಿಶ್ವ ಶೌಚಾಲಯ ದಿನದಂದು "ಬಯಲು ಬಹಿರ್ದೆಸೆ ಮುಕ್ತ" ಎಂದು ಘೋಷಿಸಲಾಗಿದೆ.

ತದನಂತರದಲ್ಲಿ ಕೇಂದ್ರ ಸರ್ಕಾರದ ಸೂಚನೆಯಂತೆ, 2012ರ ಬೇಸ್‌ಲೈನ್ ಸಮೀಕ್ಷೆಯಿಂದ ಹೊರಗುಳಿದ ಹಾಗೂ ಹೊಸದಾಗಿ ನಿರ್ಮಾಣವಾದ ಮನೆಗಳಿಗೆ ಶೌಚಾಲಯ ನಿರ್ಮಿಸಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ 4.13ಲಕ್ಷ ಕುಟುಂಬಗಳು ಶೌಚಾಲಯ ರಹಿತ ಎಂದು ವರದಿಯಾಗಿರುತ್ತದೆ. ಈ ಕುಟುಂಬಗಳಿಗೆ Left Out baseline survey (LoB) ಹಾಗೂ No one Left Behind (NoLB) ಎಂದು ಎರಡು ಹಂತಗಳಲ್ಲಿ ಗುರುತಿಸಿ ಈ ಎಲ್ಲಾ ಕುಟುಂಬಗಳಿಗೆ ಶೌಚಾಲಯಗಳನ್ನು ನಿರ್ಮಾಣ ಮಾಡಲಾಗಿದೆ.

ಆದರೂ ಸಹ ಗ್ರಾಮೀಣ ಪ್ರದೇಶದಲ್ಲಿ ಶೌಚಾಲಯ ರಹಿತ ಕುಟುಂಬಗಳು ಇರುವುದು ಕಂಡು ಬಂದಿರುತ್ತದೆ. ಜನವರಿ-2021ರಲ್ಲಿ ಕೇಂದ್ರ ಸರ್ಕಾರವು ಪುನಃ ಶೌಚಾಲಯ ರಹಿತ ಕುಟುಂಬಗಳನ್ನು ಗುರುತಿಸಿ, ಶೌಚಾಲಯ ನಿರ್ಮಿಸಲು ಕ್ರಮವಹಿಸುವಂತೆ ತಿಳಿಸಲಾಗಿರುತ್ತದೆ. ಅದರಂತೆ, ರಾಜ್ಯದಲ್ಲಿ ಒಟ್ಟಾರೆ 1.14ಲಕ್ಷ ಕುಟುಂಬಗಳು ಶೌಚಾಲಯ ರಹಿತ ಎಂದು ಗುರುತಿಸಲ್ಪಟ್ಟಿದ್ದು, ಈವರೆಗೆ 0.84ಲಕ್ಷ ಕುಟುಂಬಗಳಿಗೆ ಶೌಚಾಲಯಗಳನ್ನು ನಿರ್ಮಾಣ ಮಾಡಲಾಗಿದ್ದು, ಬಾಕಿ ಕುಟುಂಬಗಳಿಗೆ ಶೌಚಾಲಯ ನಿರ್ಮಾಣ ಕಾರ್ಯವನ್ನು ಶೀಘ್ರದಲ್ಲಿಯೇ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ.

2...

ಗ್ರಾಮೀಣ ಪ್ರದೇಶದಲ್ಲಿ ಶೌಚಾಲಯ ನಿರ್ಮಿಸಲು ಸ್ಥಳದ ಅಭಾವವಿರುವ ಕುಟುಂಬಗಳಿಗೆ ಹಾಗೂ ಸಾರ್ವಜನಿಕ ಜನನಿಬಿಡ ಪ್ರದೇಶಗಳಲ್ಲಿ ಸಮುದಾಯ/ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಈವರೆಗೆ 1882 ಶೌಚಾಲಯಗಳಿಗೆ ಅನುಮೋದನೆ ನೀಡಲಾಗಿದ್ದು, 1696 ಶೌಚಾಲಯಗಳನ್ನು ಪೂರ್ಣಗೊಳಿಸಿ ಬಳಕೆ ಮಾಡಲಾಗುತ್ತಿದೆ.

ಗ್ರಾಮೀಣ ಜನರಿಗೆ ಶೌಚಾಲಯದ ಬಳಕೆ ಮತ್ತು ನಿರ್ವಹಣೆಯ ಬಗ್ಗೆ ಹೆಚ್ಚಿನ ಅರಿವು ಮೂಡಿಸಲು ಕೆಳಕಂಡ ವಿವಿಧ ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.

- ಗೋಡೆ ಬರಹ, ಕಲಾಜಾಥಾ, ವಿಶೇಷ ಗ್ರಾಮ ಸಭೆಗಳ ಆಯೋಜನೆ.
- ಕಿರುಚಿತ್ರಗಳ ಚಿತ್ರೀಕರಣ ಹಾಗೂ ಪ್ರದರ್ಶನ.
- ಸಾಮಾಜಿಕ ಜಾಲತಾಣಗಳಾದ Facebook, Twitter, Instagram, You-tube ಹಾಗೂ WhatsApp group ಗಳಲ್ಲಿಯೂ ಸಹ ಅರಿವು ಮೂಡಿಸುವಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

➢ **ವಿಶೇಷ ಅಭಿಯಾನಗಳ ಆಯೋಜನೆ:**

- ಸ್ವಚ್ಛತಾ ಹೀ ಸೇವಾ
- ದಸ್ ಕಾ ಧಮ್ ಹರ್ ಧಮ್
- ಸಾಮಾಜಿಕ ಮಾಧ್ಯಮ ವಿಶೇಷ ಆಂದೋಲನ
- ಅಜಾದ್ ಕೀ ಅಮೃತ್ ಮಹೋತ್ಸವ್
- ಸ್ವಚ್ಛ ಸಂಕೀರ್ಣ ಸ್ವಚ್ಛ ಪರಿಸರ.

➢ **ಪರಿಹಾರ ಸಹಾಯವಾಣಿ:**

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಸಮಸ್ಯೆಗಳಿಗೆ ಹಾಗೂ ಸೌಲಭ್ಯಗಳ ಕುರಿತು ಸಾರ್ವಜನಿಕರಿಂದ ದೂರುಗಳು ಹಾಗೂ ಮನವಿಗಳನ್ನು ಸ್ವೀಕರಿಸಲು ಪರಿಹಾರ ಸಹಾಯವಾಣಿ ಪ್ರಾರಂಭಿಸಲಾಗಿದ್ದು, (9480985555) ಸಾರ್ವಜನಿಕರಿಂದ ದೂರು/ ಕುಂದುಕೊರತೆಗಳನ್ನು ನೇರವಾಗಿ ಸ್ವೀಕರಿಸಿ ಸೂಕ್ತ ಪರಿಹಾರ ನೀಡಲಾಗುತ್ತಿದೆ.

**(ಕೆ.ಎಸ್.ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್
ರಾಜ್ ಸಚಿವರು